ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1798
2. ಸದಸ್ಯರ ಹೆಸರು : ಶ್ರೀ.ಕೆ.ಎ.ತಿಪ್ಪೇಸ್ವಾಮಿ
3. ಉತ್ತರಿಸಬೇಕಾದ ದಿನಾಂಕ : 15.03.2022
4. ಉತ್ತರಿಸುವ ಸಚಿವರು : ಸಹಕಾರ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ	ರಾಜ್ಯದ ಮುಖ್ಯಮಂತ್ರಿಗಳು 2021-22ನೇ ಸಾಲಿನ ಆಯವ್ಯಯದಲ್ಲಿ ಯಶವಂತಪುರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ವತಿಯಿಂದ ಬೈಯಪ್ಪನಹಳ್ಳಿಯ 8 ಎಕರೆ ಜಮೀನಿನಲ್ಲಿ 50 ಕೋಟಿ ರೂ.ಗಳ ವೆಚ್ಚದಲ್ಲಿ ಸುಸಜ್ಜಿತ ಹೂವಿನ ಮಾರುಕಟ್ಟೆ ಮತ್ತು ಸಿಂಗೇನ ಅಗ್ರಹಾರದ ಹಣ್ಣು ಮಾರುಕಟ್ಟೆಗೆ ಹೊಂದಿಕೊಂಡಿರುವ ಗುಳಿಮಂಗಳ ಗ್ರಾಮದ 42 ಎಕರೆ ಪ್ರದೇಶದಲ್ಲಿ ಅತ್ಯಾಧುನಿಕ ತರಕಾರಿ ಮಾರುಕಟ್ಟೆ ನಿರ್ಮಾಣ ಮಾಡುವುದಾಗಿ ಘೋಷಿಸಿದ್ದು, ಈ ಮಾರುಕಟ್ಟೆಗಳ ನಿರ್ಮಾಣದ ಪ್ರಗತಿ ಯಾವ ಹಂತದಲ್ಲಿದೆ; (ಸಂಪೂರ್ಣ ವಿವರ ನೀಡುವುದು).	ಯಶವಂತಪುರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯು ಬೈಯಪ್ಪನಹಳ್ಳಿಯಲ್ಲಿ ಹೊಂದಿರುವ ಜಮೀನು ಹೂವಿನ ಮಾರುಕಟ್ಟೆ ಸ್ಥಾಪನೆಗೆ ಅಷ್ಟಾಗಿ ಸೂಕ್ತವೆಂದು ಕಂಡುಬರದೇ ಇರುವ ಕಾರಣ, ಸದರಿ ಜಮೀನಿನ ಬದಲಾಗಿ, ತೋಟಗಾರಿಕೆ ಇಲಾಖೆಗೆ ಪಶು ವೈದ್ಯಕೀಯ ವಿಶ್ವವಿದ್ಯಾಲಯದಿಂದ ಹೆಬ್ಬಾಳದ ಸಿ.ಟಿ.ಎಸ್. ಸಂಖ್ಯೆ-2, ಬ್ಲಾಕ್ ನಂ.ಡಿ ಮತ್ತು ಇ ನಲ್ಲಿ ಹಂಚಿಕೆ ಮಾಡಿರುವ ಸುಮಾರು 10 ಎಕರೆ ಜಾಗದಲ್ಲಿ ಹೂವಿನ ಮಾರುಕಟ್ಟೆ ಸ್ಥಾಪನೆಗೆ ಸೂಕ್ತವೆಂದು ಕಂಡುಬಂದಿದೆ. ಹಾಗಾಗಿ ಸದರಿ ಯೋಜನೆಯ ಅನುಷ್ಠಾನವನ್ನು ಕೃಷಿ ಮಾರಾಟ ಇಲಾಖೆಯ ಬದಲಾಗಿ, ತೋಟಗಾರಿಕಾ ಇಲಾಖೆಯ ವತಿಯಿಂದ ಅನುಷ್ಠಾನಗೊಳಿಸುವ ಬಗ್ಗೆ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ. ಸಿಂಗೇನ ಅಗ್ರಹಾರದ ಹಣ್ಣು ಮಾರುಕಟ್ಟೆಗೆ ಹೊಂದಿಕೊಂಡಿರುವ ಗೂಳಿಮಂಗಲ ಗ್ರಾಮದ 42 ಎಕರೆ ಪ್ರದೇಶದಲ್ಲಿ ಅತ್ಯಾಧುನಿಕ ತರಕಾರಿ ಮಾರುಕಟ್ಟೆ ನಿರ್ಮಾಣ ಮಾಡುವ ಯೋಜನೆಯ ಅನುಷ್ಠಾನದ ಕುರಿತಂತೆ, ಬೆಂಗಳೂರು ಜಿಲ್ಲೆ, ಆನೇಕಲ್ ತಾಲ್ಲೂಕು, ಸರ್ಜಾಪುರ ಹೋಬಳಿ, ಗೂಳಿಮಂಗಲ ಗ್ರಾಮದಲ್ಲಿ 42 ಎಕರೆ 31 ಗುಂಟೆ ಜಮೀನನ್ನು ಹಣ್ಣು ಹೂವು ಮತ್ತು ತರಕಾರಿಗಳ (ವಿಶೇಷ) ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯು ಭೂಸ್ವಾಧೀನದ ಮೂಲಕ ಸ್ವಾಧೀನಕ್ಕೆ ಪಡೆದುಕೊಂಡಿರುತ್ತದೆ. ಸದರಿ ಜಮೀನಿನಲ್ಲಿ ಅಂದಾಜು ರೂ.60.00 ರಿಂದ 70.00 ಕೋಟಿ ವೆಚ್ಚದಲ್ಲಿ ಮೂಲಭೂತ ಸೌಕರ್ಯಗಳೊಂದಿಗೆ ಮಾರುಕಟ್ಟೆ ಪ್ರಾಂಗಣವನ್ನು ಅಭಿವೃದ್ಧಿಪಡಿಸಲು ಅಂದಾಜಿಸಿದ್ದು, ಯೋಜನೆಗೆ ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ ವಿಷಯವು ಪರಿಶೀಲನಾ ಹಂತದಲ್ಲಿರುತ್ತದೆ.
ಆ	ಅದೇ ರೀತಿ ಬಳ್ಳಾರಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಿಂದ ಅಲದಹಳ್ಳಿ ಗ್ರಾಮದಲ್ಲಿ ಅತ್ಯಾಧುನಿಕ ಸೌಲಭ್ಯಗಳುಳ್ಳ ಒಣ ಮೆಣಸಿನಕಾಯಿ ಮಾರುಕಟ್ಟೆ ನಿರ್ಮಾಣ ಮತ್ತು ಚಾಮರಾಜನಗರದಲ್ಲಿ ಅರಿಶಿನ ಮಾರುಕಟ್ಟೆ ಅಭಿವೃದ್ಧಿಯನ್ನು ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ಕೈಗೊಳ್ಳಲಾಗುವುದೆಂದು	ಬಳ್ಳಾರಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಿಂದ ಆಲದಹಳ್ಳಿ ಗ್ರಾಮದಲ್ಲಿ ಅತ್ಯಾಧುನಿಕ ಸೌಲಭ್ಯವುಳ್ಳ ಒಣಮೆಣಸಿನಕಾಯಿ ಮಾರುಕಟ್ಟೆ ನಿರ್ಮಾಣ ಮಾಡುವ ಕುರಿತಂತೆ ತಾತ್ವಿಕ ಮಂಜೂರಾತಿ ನೀಡಲಾಗಿದೆ. ಕಂದಾಯ ಇಲಾಖೆಯಿಂದ ಪಡೆಯಲಾದ ಜಮೀನು ಸದರಿ ಯೋಜನೆಯ ಉದ್ದೇಶಕ್ಕೆ ಅಷ್ಟಾಗಿ ಸೂಕ್ತವಲ್ಲವೆಂದು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯು ಅಭಿಪ್ರಾಯಪಟ್ಟು, ಪ್ರಸ್ತುತ ಮಂಜೂರಾದ ಜಮೀನಿನ ಬದಲು ಆಲದಹಳ್ಳಿ ಗ್ರಾಮದ ಸರ್ವೆ ನಂ.25/ಬಿ ರಲ್ಲಿ 21.33 ಎಕರೆ ಹಾಗೂ 25/ಎ2 ರಲ್ಲಿ 5.03 ಎಕರೆ ಹೀಗೆ ಒಟ್ಟು 26.36 ಎಕರೆ ಬದಲಿ ಜಮೀನನ್ನು ಮಂಜೂರು ಮಾಡಲು ಕೋರಿ ಜಿಲ್ಲಾಧಿಕಾರಿಗಳು,

...2

	ಘೋಷಿಸಿದ್ದು, ಈ ಯೋಜನೆಗಳ ಅನುಷ್ಠಾನ ಪ್ರಗತಿ ಯಾವ ಹಂತದಲ್ಲಿದೆ; (ಸಂಪೂರ್ಣ ವಿವರ ನೀಡುವುದು).	ಬಳ್ಳಾರಿ ಜಿಲ್ಲೆ, ಇವರಿಗೆ ಮತ್ತು ಕಂದಾಯ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ. ಬದಲಿ ಜಮೀನು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ಹಂಚಿಕೆಯಾದ ಕೂಡಲೇ ಯೋಜನೆಯ ಅನುಷ್ಠಾನಕ್ಕೆ ಅಗತ್ಯ ಕ್ರಮ ವಹಿಸಲಾಗುವುದು. ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳು ಈ ಹಿಂದೆ ಸಂಗ್ರಹಿಸಲಾಗುತ್ತಿದ್ದ ಮಾರುಕಟ್ಟೆ ಶುಲ್ಕವನ್ನು ಶೇ.0.60ಕ್ಕೆ ಇಳಿಕೆ ಮಾಡಲಾಗಿರುವುದರಿಂದ ಮಾರುಕಟ್ಟೆ ಶುಲ್ಕದ ಸಂಗ್ರಹಣೆ ಗಣನೀಯವಾಗಿ ಇಳಿಕೆ ಆಗಿರುವುದನ್ನು ಹಾಗೂ ಚಾಮರಾಜನಗರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯು ಆರ್ಥಿಕವಾಗಿ ಸದೃಢವಾಗಿಲ್ಲದಿರುವ ಅಂಶವನ್ನು ಪರಿಗಣಿಸಿ ದಿನಾಂಕ:05.01.2022ರ ಆದೇಶದನ್ವಯ ಚಾಮರಾಜನಗರದಲ್ಲಿ ಅರಿಶಿನ ಮಾರುಕಟ್ಟೆ ಅಭಿವೃದ್ಧಿಪಡಿಸುವ ಯೋಜನೆಯನ್ನು ಕೈಬಿಡಲಾಗಿರುತ್ತದೆ.
ಇ	ಬ್ಯಾಡಗಿ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ 'ಆಧುನಿಕ ಗುಣವಿಶ್ಲೇಷಣಾ ಘಟಕ' ವನ್ನು ನಾಲ್ಕು ಕೋಟಿ ರೂ.ಗಳ ವೆಚ್ಚದಲ್ಲಿ ಸ್ಥಾಪಿಸಲಾಗುವುದೆಂದು ಸರ್ಕಾರ ಘೋಷಿಸಿದ್ದು, ಈ ಘಟಕ ಸ್ಥಾಪನೆ ಮತ್ತು ಅನುಷ್ಠಾನ ಯಾವ ಹಂತದಲ್ಲಿದೆ? (ಸಂಪೂರ್ಣ ವಿವರ ನೀಡುವುದು).	ಸದರಿ ಯೋಜನೆಯ ಅನುಷ್ಠಾನದ ಕುರಿತಂತೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಯೋಜನೆಯ ಅನುಷ್ಠಾನಕ್ಕಾಗಿ Spices Board, Cochin, Kerala ಇವರೊಂದಿಗೆ ಅನುಷ್ಠಾನಗೊಳಿಸುವ ಸಂಬಂಧ MoU ಮಾಡಿಕೊಳ್ಳಲು ಕ್ರಮ ವಹಿಸಲಾಗಿದೆ.

ಸಂಖ್ಯೆ: ಸಿಓ 70 ಎಂಆರ್ಇ 2022

(ಎಸ್.ಟಿ.ಸೋಮಶೇಖರ್)
ಸಹಕಾರ ಸಚಿವರು